ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2257

ಸದಸ್ಯರ ಹೆಸರು : ಡಾ. ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 21/03/2022.

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು;	ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ಖಾಲಿ ಹುದ್ದೆಗಳಿಗೆ 2019-2020 ಹಾಗೂ 2020-2021ನೇ ಸಾಲಿನಲ್ಲಿ ಈ ಕೆಳಕಂಡಂತೆ ಬೆಂಗಳೂರು ಹಾಗೂ ಮೈಸೂರು ವಿಭಾಗಗಳ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ 'ಬಿ' ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದೆ.

ಅವಧಿ	ಬೆಂಗಳೂರು ವಿಭಾಗ	ಮೈಸೂರು ವಿಭಾಗ	ಒಟ್ಟು
2018-19	ಬಡ್ತಿ ನೀಡಿರುವುದಿಲ್ಲ		
2019-20	234	347	581
2020-21	56	70	126
ಒಟ್ಟು	**290**	**417**	**707**

ಕ್ರ. ಸಂ	ಪ್ರಶ್ನೆ	ಉತ್ತರ
ಆ)	ಕಳೆದ 25 ವರ್ಷಗಳಿಗೂ ಮೇಲ್ಪಟ್ಟು ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಇದುವರೆವಿಗೂ ಒಂದೂ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಜೇಷ್ಠತೆ ಆಧಾರದ ಮೇಲೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು / ತತ್ಸಮಾನ ಬಿ ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ.

ಇ)	ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಖಾಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಹುದ್ದೆಗಳೆಷ್ಟು; (ವಿವರಗಳನ್ನು ನೀಡುವುದು)	ಪ್ರಸ್ತುತ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ಮೂಲಕ ತುಂಬಬೇಕಾದ ಹುದ್ದೆಗಳು - 356.
ಈ	ಮೇಲ್ಕಂಡ ವಿಭಾಗಗಳಲ್ಲಿ ಅರ್ಹ ಅಭ್ಯರ್ಥಿಗಳಿದ್ದರೂ ಇದುವರೆವಿಗೂ ಖಾಲಿ ಹುದ್ದೆಗಳಿಗೆ ಪದೋನ್ನತಿಯನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; ಯಾವ ಕಾಲಮಿತಿಯೊಳಗೆ ಮುಂಬಡ್ತಿ ಪ್ರಕ್ರಿಯೆಯನ್ನು ಸರ್ಕಾರ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)	ಪ್ರಸ್ತುತ ಪ್ರೌಢಶಾಲಾ ಶಿಕ್ಷಕರ ಜೇಷ್ಠತಾ ಪಟ್ಟಿಯ ಅಂತಿಮ ಹಂತದ ಪ್ರಕ್ರಿಯೆ ಚಾಲನೆಯಲ್ಲಿದ್ದು, ಸದರಿ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟವಾದ ನಂತರ ನಿಯಮಾನುಸಾರ ಬಡ್ತಿ ನೀಡಲು ಕ್ರಮವಹಿಸಲಾಗುವುದು.

ಸಂಖ್ಯೆ: ಇಪಿ 53 ಎಸ್‌ಓಹೆಚ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು